# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ, ವಾರ್ಡ್ ಮಟ್ಟದ ವಿಕೇಂದ್ರೀಕೃತ ಚಿಕಿತ್ಸೆಯ ಸರದಿ ನಿರ್ಧಾರ ಮತ್ತು ತುರ್ತು ಪ್ರತಿಕ್ರಿಯೆ ಸಮಿತಿ (W.De.T.E.R.C.), ಸಹಾಯಕ ಇಂಜಿನಿಯರ್‌ರವರ ಕಛೇರಿ, ಶಂಕರಮಠ ವಾರ್ಡ್ ಸಂಖ್ಯೆ: 75, 15ನೇ ಮುಖ್ಯರಸ್ತೆ, 4ನೇ ಅಡ್ಡರಸ್ತೆ, ಕಿರ್ಲೋಸ್ಕರ್ ಕಾಲೋನಿ, 3ನೇ ಹಂತ, ಬೆಂಗಳೂರು–79.

---

ಸಂಖ್ಯೆ: W-75/DE.T.E.R./Proceedings-01/2021-22 ದಿನಾಂಕ: 12/05/2021

**–:ಸಭೆಯ ನಡವಳಿಗಳು:–**

ಮಾನ್ಯ ಮುಖ್ಯ ಅಯುಕ್ತರ ಕಛೇರಿ ಆದೇಶ ಸಂಖ್ಯೆ: ಬಿ12(ಕೋ–19)/04/2021–22 ರಂತೆ ವಾರ್ಡ್–75 ಶಂಕರಮಠದ ವಾರ್ಡ್ ಮಟ್ಟದ ವಿಕೇಂದ್ರೀಕೃತ ಚಿಕಿತ್ಸೆಯ ಸರದಿ ನಿರ್ಧಾರ ಮತ್ತು ತುರ್ತು ಪ್ರತಿಕ್ರಿಯೆ ಸಮಿತಿ (W.D.C.) ಗೆ ನೇಮಿಸಿರುವ ಮಾನ್ಯ ನೋಡಲ್ ಅಧಿಕಾರಿಯವರ ಆದೇಶದಂತೆ, ದಿನಾಂಕ: 12/05/2021 ಬುಧವಾರದಂದು ಬೆಳಿಗ್ಗೆ 10.00 ಘಂಟೆಗೆ ವಾರ್ಡ್–75 ಶಂಕರಮಠದ ವಾರ್ಡ್ ಕಛೇರಿಯಲ್ಲಿ ತುರ್ತು ಸಭೆಯನ್ನು ಆಯೋಜಿಸಲಾಯಿತು.

ಶ್ರೀಪುಟ್ಟಸ್ವಾಮಿ ಸಮಿತಿಯ, ಕಾರ್ಯದರ್ಶಿಗಳು ರವರು ಸಭೆಯನ್ನು ನಡೆಸುತ್ತಾ, ಸಭೆಯಲ್ಲಿ ಉಪಸ್ಥಿತರಾಗಿರುವ ಮಾನ್ಯ ನೋಡಲ್ ಅಧಿಕಾರಿಯವರಿಗೆ ಮತ್ತು ಸಭೆಗೆ ಆಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಸಭೆಗೆ ಸ್ವಾಗತ ಕೋರಿದರು, ನಂತರ ಮಾನ್ಯ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು.

**ಸಭೆಯಲ್ಲಿ ಹಾಜರಿದ್ದವರು:**

| | |
|---|---|
| 1 | ಶ್ರೀ. ಎಲ್. ಸುರೇಶ್, ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್–75. |
| 2 | ಶ್ರೀ ಪುಟ್ಟಸ್ವಾಮಿ, ಸಮಿತಿ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ವಾರ್ಡ್–75. |
| 3 | ಶ್ರೀ ಸಿದ್ದರಾಮೇಶ್ವರ್, ಕಂದಾಯ ಪರಿವೀಕ್ಷಕರು, ವಾರ್ಡ್–75 |
| 4 | ಶ್ರೀ ಸುನೀಲ್ ಕುಮಾರ್, ಕಂದಾಯ ಪರಿವೀಕ್ಷಕರು, ವಾರ್ಡ್–75 |
| 5 | ಶ್ರೀ. ಅನೀಲ್ ಕುಮಾರ್ ಕೆ.ಎಲ್., ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್–75. |

**ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:**

- ಮಾನ್ಯ ನೋಡಲ್ ಅಧಿಕಾರಿಯವರು ಕೋವಿಡ್–19 ಸಾಂಕ್ರಾಮಿಕ ರೋಗವನ್ನು ತಡೆಗಟ್ಟಲು ಮಾನ್ಯ ಮುಖ್ಯ ಅಯುಕ್ತರ ಕಛೇರಿ ಆದೇಶ ಸಂಖ್ಯೆ: ಬಿ12(ಕೋ–19)/04/2021–22 ರಂತೆ ಪಾಲಿಕೆಯ ಎಲ್ಲಾ ವಾರ್ಡ್‌ಗಳಲ್ಲಿ ವಾರ್ಡ್ ಮಟ್ಟದ ವಿಕೇಂದ್ರೀಕೃತ ಚಿಕಿತ್ಸೆಯ ಸರದಿ ನಿರ್ಧಾರ ಮತ್ತು ತುರ್ತು ಪ್ರತಿಕ್ರಿಯೆ ಸಮಿತಿಯನ್ನು ರಚಿಸುವ ಕುರಿತು ಮಾತನಾಡುತ್ತಾ, ಮಾನ್ಯ ಮುಖ್ಯ ಅಯುಕ್ತರ ಆದೇಶದಂತೆ ಸದರಿ ವಾರ್ಡ್‌ನಲ್ಲಿನ,
  ನೋಡೆಲ್ ಅಧಿಕಾರಿ– ಅಧ್ಯಕ್ಷರು
  ವಾರ್ಡ್‌ನ ಸಹಾಯಕ ಅಭಿಯಂತರರು – ಸದಸ್ಯ ಕಾರ್ಯದರ್ಶಿ
  ವಾರ್ಡ್‌ಗೆ ಸಂಬಂಧಿಸಿದ ಪಾಲಿಕೆಯ ಎಲ್ಲಾ ಅಧಿಕಾರಿಗಳು– ಸದಸ್ಯರು
  ವಾರ್ಡ್‌ಗೆ ಸಂಬಂಧಿಸಿದ ಇತರೆ ಎಲ್ಲಾ ಅಧಿಕಾರಿಗಳು–ಸದಸ್ಯರು
  ವಾರ್ಡ್‌ನಲ್ಲಿನ ಸಾಮಾಜಿಕ ಕಲ್ಯಾಣ ಅಸೋಸಿಯೇಷನ್‌ಗಳು– ಸದಸ್ಯರು
  ಸ್ವಯಂ ಸೇವಕರು– ಸದಸ್ಯರು
  ಆಗಿದ್ದು, ಅದರಂತೆ ಸಮಿತಿಯನ್ನು ರಚಿಸಲು ಸೂಚಿಸಲಾಗಿರುತ್ತದೆ ಎಂದು ಸಭೆಯಲ್ಲಿ ತಿಳಿಸಿದರು.
- ಮುಂದುವರೆದು, ಮಾನ್ಯ ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ : **RD 158 TNR 2020 (1), Dated: 07-05-2021** ರಂತೆ ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್ ಸೋಂಕಿತ ರೋಗಿಗಳಿಗೆ ಅಗತ್ಯ ಚಿಕಿತ್ಸೆ ದೊರಕಿಸಿಕೊಡುವ ನಿಟ್ಟಿನಲ್ಲಿ **Triage room** ಅನ್ನು ರಚಿಸಬೇಕಾಗಿರುತ್ತದೆ. ಆದುದರಿಂದ ನಮ್ಮ ವಾರ್ಡ್ ವ್ಯಾಪ್ತಿಯಲ್ಲಿ ಸೂಕ್ತವಾದ ಸ್ಥಳವನ್ನು ಗುರುತಿಸುವುದು ಅಗತ್ಯವಾಗಿರುತ್ತದೆ ಎಂದು ಸಭೆಯಲ್ಲಿ ತಿಳಿಸಿದರು.
- ನಂತರ ಕಾರ್ಯದರ್ಶಿರವರು ಹಾಗೂ ಶ್ರೀ ಅನೀಲ್, ಕಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಶ್ರೀ ಸುನೀಲ್, ಕಂದಾಯ ಪರಿವೀಕ್ಷಕರು ರವರು ಮಾತನಾಡುತ್ತಾ, ಕುರುಬರಹಳ್ಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಆದಿ ಶೃಂಗೇರಿ ಶಂಕರಾಚಾರ್ಯರರ ಮಠದ ಮಂಟಪದಲ್ಲಿ **Triage room** ರಚಿಸಲು ಸೂಕ್ತವಾಗಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಮು.ತಿ.ನೋ.

Scanned by CamScanner

- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಸದರಿ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲಿಸುವುದು ಅಗತ್ಯವಾಗಿರುವುದಾಗಿ ಸಭೆಯಲ್ಲಿ ತಿಳಿಸಿದರು.

ನಂತರ, ಸಭೆಯಲ್ಲಿ ಉಪಸ್ಥಿತವಿರುವ ಎಲ್ಲಾ ಅಧಿಕಾರಿಗಳು ಪರಿವೀಕ್ಷಣೆಗಾಗಿ ತೆರಳಿದರು.

- ಮೊದಲಿಗೆ ಕುರುಬರಹಳ್ಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ತೆರಳಿದರು ನಂತರ, ಆದಿ ಶೃಂಗೇರಿ ಶಂಕರಾಚಾರ್ಯರರ ಮಠದ ಮಂಟಪವನ್ನು ಪರಿಶೀಲಿಸಲಾಯಿತು ಹಾಗೂ ಸಂಬಂಧಿತ ನಿರ್ವಹಣಾ ಸಮಾಲೋಚಕರೊಂದಿಗೆ **Triage room** ಆಯೋಜಿಸುವ ಬಗ್ಗೆ ಚರ್ಚಿಸಲಾಯಿತು.

- ಕೊನೆಯಲ್ಲಿ, ಅಗತ್ಯ ಸಿಬ್ಬಂದಿ ವರ್ಗದವರು **Triage room** ನಲ್ಲಿ ಅಗತ್ಯವಿರುವುದರಿಂದ ವಾರ್ಡ್ ವ್ಯಾಪ್ತಿಯಲ್ಲಿರುವ ನರ್ಸಿಂಗ್ ಕಾಲೇಜುಗಳಲ್ಲಿ ಅಂತಿಮ ವರ್ಷದಲ್ಲಿ ವ್ಯಾಸಂಗ ಮಾಡುತ್ತಿರುವ ಕೆಲವು ವಿಧ್ಯಾರ್ಥಿಗಳನ್ನು ಸ್ಟಾಫ್‌ನರ್ಸ್ ಹಾಗೂ ವಾಲಂಟಿಯರ್ಸ್ ಆಗಿ ಕಳುಹಿಸಿಕೊಡುವಂತೆ ಕೋರಿ ಪತ್ರ ಬರೆಯುವಂತೆ ಕಾರ್ಯದರ್ಶಿಗಳಿಗೆ ತಿಳಿಸಿದರು.

- ಇಂದು ತುರ್ತಾಗಿ ದಿನಾಂಕ: 11.05.2021 ರಂದು ಮಾನ್ಯ ಮುಖ್ಯ ಆಯುಕ್ತರು, ಬಿಬಿಎಂಪಿ ರವರ ಆದೇಶ ಸಂಖ್ಯೆ: **ಬಿ12(ಕೋ-19)/04/2021-22** ರಂತೆ ತುರ್ತಾಗಿ **W.D.C** ಅನ್ನು ರಚಿಸುವ ಬಗ್ಗೆ ಸದರಿ ಸದರಿ ಸಮಿತಿ ಕಾರ್ಯ ನಡೆಸುವ ಕಛೇರಿ ಹಾಗೂ ಎನ್.ಜಿ.ಓ, ಆರ್.ಡಬ್ಲ್ಯೂ.ಎ, ಸ್ವಯಂ ಸೇವಕರು ಮತ್ತು ಇತರೆ ಅಧಿಕಾರಿಗಳ ನೇಮಕಾತಿ ಕುರಿತಂತೆ ಚರ್ಚಿಸಲು ತುರ್ತಾಗಿ ಸಭೆ ಕರೆಯಲು ಸೂಚಿಸಲಾಯಿತು.

ಮುಂದುವರೆದು, ಪ್ರತೀ ಸಭೆಯ ಸಭಾ ನಡವಳಿಗಳನ್ನು ಸಮಿತಿಯ ಎಲ್ಲಾ ಸದಸ್ಯರುಗಳಿಗೆ ತಲುಪುವಂತೆ ಮಾಡಲು ಕಾರ್ಯದರ್ಶಿ ರವರಿಗೆ ಸೂಚಿಸಿದರು. ಸಮಿತಿಯ ಎಲ್ಲಾ ಸದಸ್ಯರುಗಳು ತಮಗೆ ವಹಿಸಿದ ಕಾರ್ಯಗಳನ್ನು ಸೂಕ್ತವಾಗಿ ನಿಯಂತ್ರಿಸುವಂತೆ ಸೂಚಿಸುತ್ತಾ, ಸಭೆಯನ್ನು ಮುಕ್ತಾಯಗೊಳಿಸಲಾಯಿತು. ಕೊನೆಯಲ್ಲಿ ಕಾರ್ಯದರ್ಶಿಗಳು ಸಭೆಗೆ ಆಗಮಿಸಿರುವ ಎಲ್ಲರಿಗೂ ವಂದಿಸಿದರು.

ನೋಡಲ್ ಅಧಿಕಾರಿರವರ ಅನುಮೋದನೆ ಮೇರೆಗೆ )

ಕಾರ್ಯದರ್ಶಿ
ಹಾಗೂ ಧಸಹಾಯಕ ಅಭಿಯಂತರರು,
ವಾರ್ಡ್ ಸಂಖ್ಯೆ: 75

<u>ಪ್ರತಿಯನ್ನು</u>

1. ಮಾನ್ಯ ವಲಯ ವಿಶೇಷ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3. ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ತಾಂತ್ರಿಕ ಸಹಾಯಕರಿಗೆ ಸಲ್ಲಿಸಿದೆ.
4. ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
6. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
8. ವೈದ್ಯಕೀಯ ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9. ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12. ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16. ಕಛೇರಿಯ ಕಡತಕ್ಕೆ.

Scanned by CamScanner